ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

01-08-2008ರ ನಂತರ ನೇಮಕಾತಿ ಹೊಂದಿದ ಶಿಕ್ಷಕರು/ ಉಪನ್ಯಾಸಕರಿಗೆ ವಿಶೇಷ ಭತ್ಯೆ ಮಂಜೂರು ಮಾಡುವ ಬಗ್ಗೆ

ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) :-

75 (31) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಿನಾಂಕ : 01-08-2008ರ ನಂತರ ನೇಮಕಾತಿ ಹೊಂದಿದ ಪ್ರೌಢ ಶಾಲಾ ಶಿಕ್ಷಕರು ಮತ್ತು ಉಪನ್ಯಾಸಕರಿಗೆ ವಿಶೇಷ ಭತ್ಯೆ ಮಂಜೂರು ಮಾಡದಿರುವುದರಿಂದ ಉಂಟಾಗಿರುವ ವೇತನ ಬಡ್ತಿ ತಾರತಮ್ಯವು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಅದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಯಾವ ಕಾಲಮಿತಿಯೊಳಗೆ ವಿಶೇಷ ಭತ್ಯೆ ಮಂಜೂರು ಮಾಡಲಾಗುವುದು;

(ಇ) 6ನೇ ವೇತನ ಆಯೋಗದ ಶಿಫಾರಸ್ಸಿನ ಅನ್ವಯ ದಿನಾಂಕ : 01-07-2017 ರಿಂದ ಪೂರ್ವಾನ್ವಯವಾಗಿ 1 ವಿಶೇಷ ವಾರ್ಷಿಕ ಭತ್ಯೆಯನ್ನು ನೀಡುವ ವಿಚಾರದಲ್ಲಿ ಸರ್ಕಾರದ ಸ್ಪಷ್ಟ ನಿಲುವೇನು ?